# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 388

ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 10-07-2023

ಉತ್ತರಿಸುವ ಸಚಿವರು : ಮಾನ್ಯ ಇಂಧನ ಸಚಿವರು

***

| | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿನ ವಿವಿಧ ಎಸ್ಕಾಂಗಳ ವ್ಯಾಪ್ತಿಯಲ್ಲಿ ಮಹತ್ವಕಾಂಕ್ಷೆ ಯೋಜನೆಯಾದ 'ಬೆಳಕು' ಯೋಜನೆಯಡಿ ಆಯ್ಕೆಗೊಂಡ ಫಲಾನುಭವಿಗಳ ಮನೆಗಳ ವೈಯರಿಂಗ್‌ನ ಅಂದಾಜು ಮೊತ್ತದಲ್ಲಿ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಬೆಳಕು ಯೋಜನೆಯಡಿ ರಾಜ್ಯದಲ್ಲಿ ವಿದ್ಯುತ್ ಸಂಪರ್ಕ ಇಲ್ಲದಿರುವ ಬಡ ಕುಟುಂಬದ ಮನೆಗಳಿಗೆ ದೀನ ದಯಾಳ ಉಪಾಧ್ಯಾಯ ಗ್ರಾಮ ಜ್ಯೋತಿ ಯೋಜನೆ (ಡಿ.ಡಿ.ಯು.ಜಿ.ಜೆ.ವೈ) ಹಾಗೂ ಸೌಭಾಗ್ಯ ಯೋಜನೆಗಳ ಮಾದರಿಯಲ್ಲಿಯೇ ವಿದ್ಯುತ್ ಸಂಪರ್ಕ ಕಲ್ಪಿಸಲು ಆದೇಶಿಸಲಾಗಿದೆ. |
| (ಆ) | ಬಂದಿದ್ದಲ್ಲಿ, ಅಂದಾಜು ಮೊತ್ತದಲ್ಲಿನ ಸದರಿ ವ್ಯತ್ಯಾಸಕ್ಕೆ ಇರುವ ಕಾರಣಗಳೇನು; | ಸದರಿ ಯೋಜನೆಯಡಿ ಡಿ.ಡಿ.ಯು.ಜಿ.ಜೆ.ವೈ ಹಾಗೂ ಸೌಭಾಗ್ಯ ಯೋಜನೆಯಲ್ಲಿ ಸೂಚಿಸಿರುವಂತೆ ಪ್ರತಿ ಮನೆಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಅಂದಾಜು ಮೊತ್ತವನ್ನು ಪರಿಗಣಿಸಿ ವಿದ್ಯುತ್ ಸಂಪರ್ಕ ಕಲ್ಪಿಸಲು ನಿರ್ದೇಶನಗಳನ್ನು ನೀಡಲಾಗಿತ್ತು. |
| (ಇ) | ಅಂದಾಜು ಮೊತ್ತ ಕಡಿಮೆ ಇರುವ ಎಸ್ಕಾಂಗಳ ವ್ಯಾಪ್ತಿಯಲ್ಲಿ ಕೂಡ ಮೊತ್ತವನ್ನು ಹೆಚ್ಚಿಸಿ 'ಬೆಳಕು' ಯೋಜನೆಯಡಿ ಆಯ್ಕೆಗೊಂಡ ಪ್ರತಿಯೊಬ್ಬ ಫಲಾನುಭವಿಗೂ ಸಮಾನ ಮೊತ್ತ ದೊರೆತು ಈ ಮೂಲಕ ಕ್ಷಿಪ್ರ ಸಮಯದಲ್ಲಿ ಉತ್ತಮ ಗುಣಮಟ್ಟದ ವೈಯರಿಂಗ್ ಸೌಲಭ್ಯ ದೊರೆಯುವಂತಾಗಲು ಸರ್ಕಾರ ಅಂದಾಜು ಮೊತ್ತ ಪರಿಷ್ಕರಿಸಲು ಕೂಡಲೇ ಕ್ರಮ ವಹಿಸುವುದೇ? | ಮುಂದುವರೆದು, ವಿದ್ಯುತ್ ಗುತ್ತಿಗೆದಾರರ ಸಂಘವು ಪ್ರಸ್ತುತ ಮಾರುಕಟ್ಟೆ ಮೌಲ್ಯದ ಪ್ರಕಾರ ಸಾಮಾಗ್ರಿ ಮತ್ತು ಕಾರ್ಮಿಕ ವೆಚ್ಚ ಹೆಚ್ಚಾಗಿರುವ ಕಾರಣ ವೈರಿಂಗ್‌ಗಾಗಿ ನೀಡುವ ವೆಚ್ಚವನ್ನು ಪರಿಷ್ಕರಿಸಲು ಮನವಿ ಮಾಡಿದ್ದ ಹಿನ್ನೆಲೆಯಲ್ಲಿ ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಸಮಾನ ಶ್ರೇಣಿಯಲ್ಲಿ ಅಂದಾಜು ಮೊತ್ತವನ್ನು ಪರಿಷ್ಕರಿಸಲಾಗಿರುತ್ತದೆ. |

ಸಂಖ್ಯೆ: ಎನರ್ಜಿ 138 ಇಬಿಎಸ್ 2023

(ಕೆ.ಜೆ.ಜಾರ್ಜ್)
ಇಂಧನ ಸಚಿವರು